ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

(ಅ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2 ಬಸ್ ನಿಲ್ದಾಣ ಹಾಗೂ 2 ಬಸ್ ಶೆಲ್ಟರ್‌ಗಳು ಇರುತ್ತವೆ. ವಿವರಗಳು ಈ ಕೆಳಗಿನಂತಿರುತ್ತವೆ.

1) ಮನ್ನಾ–ಏ–ಖೇಳ್ಳಿ ಬಸ್ ನಿಲ್ದಾಣ

2) ಬಗದಲ್ ಬಸ್ ನಿಲ್ದಾಣ.

3) ಚಾಂಗ್ಲೇರದಲ್ಲಿ ಬಸ್ ತಂಗುದಾಣ.

4) ಬೇಮನಖೇಡದಲ್ಲಿ ಬಸ್ ತಂಗುದಾಣ.

(ಆ) ಮೇಲಿನ 2ಬಸ್ ನಿಲ್ದಾಣ ಹಾಗೂ 2 ಬಸ್ ತಂದುದಾಣಗಳು ಕಾರ್ಯಾಚರಣೆಯಲ್ಲಿರುತ್ತವೆ.

(ಇ) ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ಮನ್ನಾ–ಏ–ಖೆಳ್ಳಿ ಬಸ್ ನಿಲ್ದಾಣದ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿದ್ದು, ಸದರಿ ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ.

(ಈ) ಪ್ರಸಕ್ತ ಸಾಲಿನಲ್ಲಿ ಮನ್ನಾ–ಏ–ಖೇಳ್ಳಿ ಬಸ್ ನಿಲ್ದಾಣದ ಅಭಿವೃದ್ಧಿ ಕಾಮಗಾರಿಗಾಗಿ `65.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದೆ.

ಸಿಬ್ಬಂದಿ ಕೊರತೆ

745 (1437); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

(ಅ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ವೈದ್ಯರ ಹಾಗೂ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಕೊರತೆ ಇರುವ ವೈದ್ಯರ / ಪರಿಣಿತ ವೈದ್ಯರು / ತಾಂತ್ರಿಕ ತಜ್ಞರ ಸಂಖ್ಯೆ ಎಷ್ಟು; (ಪೂರ್ಣ ಮಾಹಿತಿ ನೀಡುವುದು)

(ಇ) ಖಾಲಿ ಹುದ್ದೆ ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ವಿವರವನ್ನೊದಗಿಸುವುದು)

(ಈ) 2014–15ನೇ ಸಾಲಿನಲ್ಲಿ ಹೊಸ ನೇಮಕಾತಿ ಪ್ರಕ್ರಿಯೆ ಚಾಲನೆ ಮಾಡಲಾಗುವುದೇ?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಬಂದಿದೆ.

(ಆ) ಕೊರತೆ ಇರುವ ವೈದ್ಯರ / ಪರಿಣಿತ ವೈದ್ಯರು / ತಾಂತ್ರಿಕ ತಜ್ಞರ ಹುದ್ದೆಗಳ ಪೂರ್ಣ ಮಾಹಿತಿಯನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

(ಇ) ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಆಯಾಯ ಜಿಲ್ಲಾಧಿಕಾರಿಯವರಿಗೆ ಅನುಮತಿ ನೀಡಲಾಗಿದೆ. ಭಾರತ ಸಂವಿಧಾನದ ಅನುಚ್ಛೇ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳಿಯ ವೃಂದ ಕುರಿತಂತೆ ಅಧಿ ಸೂಚನೆ ಹೊರಸಿಲಾಗಿದೆ. ಈ ಹುದ್ದೆಗಳಿಗೆ ಸಂಬಂಧಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

(ಈ) ಹೌದು.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿ ಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದು ಕೊಂಡ ಕ್ರಮಗಳ ವಿವರಗಳು:

ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಆಯಾಯ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್. ಹೆಚ್.ಎಂ.) ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿ ಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 80000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ` 60000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

ಕೆ. ಹೆಚ್. ಎಸ್. ಡಿ. ಆರ್. ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ `65000 ಹಾಗೂ `50000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದು ವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ `5000 ದಿಂದ 10000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ `8000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸ ಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ `10000 ದಂತೆ ಗೌರವ ಧನ ನೀಡಲು

ಅವಕಾಶ ಕಲ್ಪಿಸಲಾಗಿದೆ. ಆದರೂ ತಜ್ಞ ವೈದ್ಯರು ಕರ್ತವ್ಯ ನಿರ್ವ ಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

ಭಾರತ ಸಂವಿಧನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳಿಯ ವೃಂದ ಕುರಿತಂತೆ ಅಧಿ ಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳಿಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ದಂತ ಆರೋಗ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಹಲವು ವೃಂದಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮೂಕಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಉದ್ದೇಶಿಸಲಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹಣ ಬಿಡುಗಡೆ:

746 (1438); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

(ಅ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು;

(ಆ) 2013–14ನೇ ಸಾಲಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡ ನಿರ್ಮಾಣ ಹಾಗೂ ದುರಸ್ತಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ;